ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಪೌರತ್ವ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ

ದಿನಾಂಕ : DATE : 28/12/2019

## ಪೌರತ್ವ ತಿದ್ದುಪಡಿ ಕಾರ್ಯಾಗಾರಕ್ಕೆ ಚಾಲನೆ ನೀಡಿದ ಸಂಸದ ಬಿ.ವೈ.ರಾಘವೇಂದ್ರ

# ಅಲ್ಪಸಂಖ್ಯಾತರಿಗೆ ಯಾವುದೇ ತೊಂದರೆಯಾಗಲ್ಲ

**ಶಿವಮೊಗ್ಗ:** ಪೌರತ್ವ ತಿದ್ದುಪಡಿ ಕಾಯಿದೆಯ ಬಗ್ಗೆ ಕೆಲ ಪಟ್ಟಭದ್ರ ಹಿತಾಸಕ್ತಿಗಳು ನಾಗರಿಕರಲ್ಲಿ ಗೊಂದಲ ಉಂಟು ಮಾಡುತ್ತಿವೆ. ಈ ಕಾಯಿದೆ ಜಾರಿಯಿಂದ ಅಲ್ಪಸಂಖ್ಯಾತರಿಗೆ ಯಾವುದೇ ಕಾರಣಕ್ಕೂ ತೊಂದರೆಯಾಗುವುದಿಲ್ಲ. ಎಲ್ಲ ಧರ್ಮೀಯರನ್ನು ಒಟ್ಟಾಗಿ ತೆಗೆದುಕೊಂಡು ಹೋಗುವಂತಹ ಪ್ರಯತ್ನ ಇದಾಗಿದೆ ಎಂದು ಸಂಸದ ಬಿ.ವೈ. ರಾಘವೇಂದ್ರ ಹೇಳಿದ್ದಾರೆ.

ಪೌರತ್ವ ತಿದ್ದುಪಡಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿ, ಡಿ.11, 2019ರ ದಿನವನ್ನು ಸುವರ್ಣಾಕ್ಷರಗಳಲ್ಲಿ ಬರೆದಿಡಬೇಕಾಗಿದೆ. ಲೋಕಸಭೆ ಹಾಗೂ ರಾಜ್ಯಸಭೆ ಎರಡಲ್ಲೂ ಈ ಕಾಯಿದೆ ಜಾರಿಯಾಗಿದ್ದು, ಇದು ದೇಶದ ನಾಗರಿಕರಿಗೆ ಅನುಕೂಲ ಕಲ್ಪಿಸುವ ದೃಷ್ಟಿಯಿಂದ ಜಾರಿಯಾಗಿರುವಂತಹ ಕಾನೂನಾಗಿದೆ ಎಂದರು.

ಲೋಕಸಭೆಯ 543 ಸದಸ್ಯರ ಬಲದಲ್ಲಿ ಎನ್‌ಡಿಎ ಒಕ್ಕೂಟ 336 ಸದಸ್ಯರನ್ನು ಹೊಂದಿದೆ. ಇದರಲ್ಲಿ ನಮ್ಮ ಪಕ್ಷ 303 ಸದಸ್ಯರನ್ನು ಹೊಂದಿದ್ದು, ಕಾಯಿದೆ ಮತಕ್ಕೆ ಹಾಕಿದಾಗ ಸದನದಲ್ಲಿದ್ದ ಸದಸ್ಯರ ಪೈಕಿ ಕಾಯಿದೆಯ ಪರವಾಗಿ 311 ಮತಗಳು ಬಂದಿದ್ದು, ವಿರುದ್ಧವಾಗಿ ಕೇವಲ 40 ಮತಗಳು ಲಭಿಸಿದವು. ರಾಜ್ಯಸಭೆಯಲ್ಲಿ ನಮ್ಮ ಪಕ್ಷಕ್ಕೆ ಬಹುಮತ ಇಲ್ಲದಿದ್ದರೂ ಕಾಯಿದೆಯ ಪರವಾಗಿ 125 ಮತಗಳು ಲಭಿಸಿವೆ. ವಿರುದ್ಧವಾಗಿ ಕೇವಲ 105 ಮತಗಳು ಬಂದವು. ಇದು ಕಾಯಿದೆಯ ಬಗ್ಗೆ ಇರುವಂತಹ ಜನಾಭಿಪ್ರಾಯವನ್ನು ತಿಳಿಸುತ್ತದೆ ಎಂದಿದ್ದಾರೆ.

ಇನ್ನು ಈ ಬಗ್ಗೆ ಕೆಲವು ಕಾಣದ ಕೈಗಳು ಕಾಯಿದೆ ವಿರುದ್ಧ ಅಪಪ್ರಚಾರ ಮಾಡುತ್ತಾ, ಸಮಾಜದಲ್ಲಿ ಅಶಾಂತಿಯನ್ನು ಉಂಟು ಮಾಡುತ್ತಿವೆ. ಕೆಲವು ರಾಜಕೀಯ ವ್ಯಕ್ತಿಗಳು ಸಹ ಇದಕ್ಕೆ ಬೆಂಬಲ ಸೂಚಿಸುತ್ತಿರುವುದು ದುರಾದೃಷ್ಟಕರ ಎಂದು ಸಂಸದ ಬಿ.ವೈ. ರಾಘವೇಂದ್ರ ಬೇಸರ ವ್ಯಕ್ತಪಡಿಸಿದರು.

ಕಾರ್ಯಾಗಾರದಲ್ಲಿ, ವಿಧಾನಪರಿಷತ್ ಮಾಜಿ ಸಭಾಪತಿ ಡಿ.ಎಚ್.ಶಂಕರಮೂರ್ತಿ, ಬಿಜೆಪಿ ಜಿಲ್ಲಾಧ್ಯಕ್ಷ ಹಾಗೂ ವಿಧಾನಪರಿಷತ್ ಸದಸ್ಯ ಎಸ್.ರುದ್ರೇಗೌಡ, ಮಾಜಿ ಎಂಎಲ್‌ಸಿ ಭಾನುಪ್ರಕಾಶ್, ಗಿರೀಶ್ ಪಟೇಲ್, ಗಣೇಶ್, ಕೆ.ಜೆ.ನಾಯಕ್ ಉಪಸ್ಥಿತರಿದ್ದರು.




### ಜನಜಾಗೃತಿ ಅಭಿಯಾನ

ಸಮಾಜದಲ್ಲಿ ಶಾಂತಿಯನ್ನು ಕದಡುವ ದೃಷ್ಟಿಯಿಂದ ಜನರಿಗೆ ಕಾಯಿದೆ ಬಗ್ಗೆ ತಪ್ಪು ತಿಳುವಳಿಕೆ ನೀಡುತ್ತಿರುವವರ ವಿರುದ್ಧವಾಗಿ ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸಲು [illegible] 1ರಿಂದ 15ರವರೆಗೆ ನಮ್ಮ ಪಕ್ಷದ ಮುಖಂಡರು, ಕಾರ್ಯಕರ್ತರು ಜನಜಾಗೃತಿ ಅಭಿಯಾನವನ್ನು ಹಮ್ಮಿಕೊಂಡಿದ್ದಾರೆ. ಕಾಯಿದೆ ಕುರಿತು ಎಲ್ಲ ವರ್ಗದ ಜನ ಸಾಮಾನ್ಯರಿಗೆ ತಿಳಿಸಲಾಗುವುದು ಎಂದು ತಿಳಿಸಿದ್ದಾರೆ.